ಉ) ನಿಗದಿತ ಶುಲ್ಕಕ್ಕಿಂತ ಹೆಚ್ಚಿಗೆ ಶುಲ್ಕವನ್ನು ಸಂಗ್ರಹಿಸುತ್ತಿಲ್ಲ.

ಬೆಂಗಳೂರು–ಮೈಸೂರು ರಸ್ತೆಯಲ್ಲಿ ರಸ್ತೆ ಉಬ್ಬುಗಳು ಹೆಚ್ಚಾಗಿರುವುದರ ಬಗ್ಗೆ

1783 (1810); ಶ್ರೀ ಅಶೋಕ್ ಆರ್. (ಪದ್ಮನಾಭ ನಗರ)

ಅ) ಬೆಂಗಳೂರು–ಮೈಸೂರು ರಸ್ತೆಯಲ್ಲಿ ಅತಿ ಹೆಚ್ಚು ಉಬ್ಬುಗಳು (ಹಂಪ್ಸ್‌ಗಳು) ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಹಂಪ್ಸ್‌ಗಳಿಂದಾಗಿ ಪ್ರಯಾಣಿಕರಿಗೆ ಮತ್ತು ಸಾರ್ವಜನಿಕರಿಗೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ರಸ್ತೆ ಉಬ್ಬುಗಳನ್ನು ತೆರವು ಮಾಡಲು ಕೈಗೊಂಡ ಕ್ರಮಗಳೇನು; ಕೈಗೊಂಡ ಕ್ರಮದ ವಿವರ ನೀಡುವುದು?

ಡಾ: ಹೆಚ್.ಸಿ. ಮಹದೇವಪ್ಪ (ಮಾನ್ಯ ಲೋಕೋಪಯೋಗಿ ಸಚಿವರು)

ಅ) ಬೆಂಗಳೂರಿನಿಂದ ರಾಮನಗರ, ಮಂಡ್ಯ ಹಾಗೂ ಮೈಸೂರು ಈ ರಸ್ತೆಯಲ್ಲಿರುವ ಒಟ್ಟು 133 ರಸ್ತೆ ಉಬ್ಬುಗಳಿದ್ದು, ಅದರಲ್ಲಿ 108 ಅವೈಜ್ಞಾನಿಕ ರಸ್ತೆ ಉಬ್ಬುಗಳಿರುತ್ತದೆ.

ಆ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಇ) ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ತೆಗೆಯುವುದು, ಅನಧಿಕೃತ ಮೀಡಿಯನ್ ತೆರವುಗಳನ್ನು ಮುಚ್ಚುವುದು ಹಾಗೂ ಅಧಿಕೃತ ಮೀಡಿಯನ್ ತೆರವುಗಳನ್ನು ಭಾರತೀಯ ರಾಷ್ಟ್ರೀಯ ಪರಿಷತ್ತಿನ (ಐ.ಆರ್.ಸಿ.) ಪ್ರಕಾರ ಸರಿಪಡಿಸುವ ಸಲುವಾಗಿ ಮೆ: ಸೀಕಾನ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಅವರಿಂದ ರಸ್ತೆ ಸುರಕ್ಷತೆಯ ಅಗತ್ಯತೆಯ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಈ ಕಾಮಗಾರಿಗಾಗಿ ₹ 16.10 ಕೋಟಿಯ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ.